# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 887
ಮಾನ್ಯ ವಿಧಾನ ಪರಿಷತ್ತು ಸದಸ್ಯರ ಹೆಸರು: ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ : 14.07.2023
ಉತ್ತರಿಸುವವರು : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು

<table>
<tr><th>ಕ್ರ ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ರಾಜ್ಯದಲ್ಲಿ ಒಟ್ಟು ಪುರುಷ ವಿಕಲಚೇತನರು ಹಾಗೂ ಹಿರಿಯ ನಾಗರಿಕರ ಸಂಖ್ಯೆ ಎಷ್ಟು;</td><td>2011ರ ಜನಗಣತಿಯ ಪ್ರಕಾರ ರಾಜ್ಯದಲ್ಲಿರುವ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಂಖ್ಯೆ ಈ ಕೆಳಕಂಡಂತಿರುತ್ತದೆ.
<table>
<tr><th>ವಿಕಲಚೇತನರ ಸಂಖ್ಯೆ</th><th>ಹಿರಿಯ ನಾಗರಿಕರ ಸಂಖ್ಯೆ</th></tr>
<tr><th>ಪುರುಷರು</th><th>ಪುರುಷರು</th></tr>
<tr><td>726521</td><td>2747072</td></tr>
</table></td></tr>
<tr><td>ಆ</td><td>ಪ್ರಸ್ತುತ ಇರುವ ನಿಯಮದಂತೆ ವಿಕಲಚೇತನರು ಹಾಗೂ ಹಿರಿಯ ನಾಗರಿಕರು ಬಸ್ಸಿನಲ್ಲಿ ಉಚಿತವಾಗಿ ಎಷ್ಟು ಕಿ.ಮೀ. ವರೆಗೂ ಪ್ರಯಾಣ ಮಾಡಬಹುದು;</td><td>ಪ್ರಸ್ತುತ ಇರುವ ನಿಯಮದಂತೆ ಅಂಧ ವಿಕಲಚೇತನರು ಕೆ.ಎಸ್.ಆರ್.ಟಿ.ಸಿ ಮತ್ತು ಬಿ.ಎಂ.ಟಿ.ಸಿ ಬಸ್ಸಿನಲ್ಲಿ ಉಚಿತವಾಗಿ 100 ಕಿ.ಮೀ.ಗಳವರೆಗೆ ಪ್ರಯಾಣಿಸಬಹುದು, ಇತರೆ ವಿಕಲಚೇತನರು ವಾರ್ಷಿಕ ರೂ.660/-ಗಳನ್ನು ಪಾವತಿಸಿ ಕೆ.ಎಸ್.ಆರ್.ಟಿ.ಸಿ ಮತ್ತು ಬಿ.ಎಂ.ಟಿ.ಸಿ ಬಸ್‌ಗಳಲ್ಲಿ ಪಾಸ್ ಪಡೆದು ವಿಕಲಚೇತನರು ವಾಸಿಸುವ ಸ್ಥಳದಿಂದ 100 ಕಿ.ಮೀಗಳವರೆಗೆ ಪ್ರಯಾಣಿಸಬಹುದಾಗಿದೆ.<br><br>ಹಿರಿಯ ನಾಗರಿಕರಿಗೆ ಬಸ್ ಪ್ರಯಾಣ ದರದಲ್ಲಿ ಶೇ.25ರಷ್ಟು ಕೆ.ಎಸ್.ಆರ್.ಟಿ.ಸಿ ಮತ್ತು ಬಿ.ಎಂ.ಟಿ.ಸಿ ಬಸ್‌ಗಳಲ್ಲಿ ರಿಯಾಯಿತಿ ದರದಲ್ಲಿ ಪ್ರಯಾಣಿಸಬಹುದಾಗಿದೆ.</td></tr>
<tr><td>ಇ</td><td>ಮಹಿಳೆಯರಿಗೆ ಉಚಿತ ಪ್ರಯಾಣ ವ್ಯವಸ್ಥೆ ಕಲ್ಪಿಸಲಾಗಿದ್ದು, ವಿಕಲಚೇತನವುಳ್ಳ ಪುರುಷರಿಗೆ ಹಾಗೂ ಹಿರಿಯ ನಾಗರಿಕರಿಗೆ, ರಾಜ್ಯದೆಲ್ಲೆಡೆ ಉಚಿತ ಪ್ರಯಾಣ ಮಾಡಲು ಅವಕಾಶ ಕಲ್ಪಿಸಿಕೊಡುವ ಆಲೋಚನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಅದು ಯಾವಾಗ ಜಾರಿಗೆ ಬರಲಿದೆ;</td><td rowspan="2">ಇಂತಹ ಯಾವುದೇ ಪ್ರಸ್ತಾವನೆಯು ಸರ್ಕಾರದ ಮುಂದಿರುವುದಿಲ್ಲ.</td></tr>
<tr><td>ಈ</td><td>ರಾಜ್ಯದಲ್ಲಿ ವಾಸಿಸುತ್ತಿರುವ ವಿಕಲಚೇತನರಿಗೆ ಹಾಗೂ ಹಿರಿಯ ನಾಗರಿಕರಿಗೆ ಉಚಿತ ಪ್ರಯಾಣಕ್ಕೆ ಅವಕಾಶ ನೀಡಿದ್ದಲ್ಲಿ ಸರ್ಕಾರಕ್ಕೆ ಆರ್ಥಿಕವಾಗಿ ಎಷ್ಟು ಹೊರೆಯಾಗುತ್ತದೆ?</td></tr>
</table>

ಮಮಇ 133 ಪಿಹೆಚ್‌ಪಿ 2023

(ಲಕ್ಷ್ಮೀ ಆರ್. ಹೆಬ್ಬಾಳಕರ್)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಹಾಗೂ ಹಿರಿಯ ನಾಗರಿಕರ
ಸಬಲೀಕರಣ ಸಚಿವರು